ಜಿಲ್ಲಾ ಯೋಜನಾ ಸಮಿತಿಗಳು

2871 - ಶ್ರೀ ಆರಗ ಜ್ಞಾನೇಂದ್ರ (ತೀರ್ಥಹಳ್ಳಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಯೋಜನಾ ಸಮಿತಿಗಳನ್ನು ಇನ್ನೂ ಏಕೆ ಕಾರ್ಯಾರಂಭಗೊಳಿಸಿರುವುದಿಲ್ಲ?

ಆ) ಜಿಲ್ಲಾ ಯೋಜನಾ ಸಮಿತಿಯ ಅಧ್ಯಕ್ಷರುಗಳು, ಉಪಾಧ್ಯಕ್ಷರುಗಳು ಯಾರು?

ಇ) ಈ ಆಯ್ಕೆ ಯಾವಾಗ ನಡೆಯುವುದು?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಪಿ.ಆರ್. ನಾಯಕ್ ತಜ್ಞರ ಸಮಿತಿಯ ಶಿಫಾರಸ್ಸಿನಂತೆ ಜಿಲ್ಲಾ ಯೋಜನಾ ಸಮಿತಿಗೆ ಅಧ್ಯಕ್ಷರ ಆಯ್ಕೆ ಬಗ್ಗೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮಕ್ಕೆ ತಿದ್ದುಪಡಿ ತರಲು ಸರ್ಕಾರ ಪರಿಶೀಲಿಸುತ್ತಿದೆ ಮತ್ತು ರಾಜ್ಯದಲ್ಲಿ 7 ಹೊಸ ಜಿಲ್ಲೆಗಳನ್ನು ರಚಿಸಿರುವುದರಿಂದ, ಜಿಲ್ಲಾ ಯೋಜನಾ ಸಮಿತಿಗೆ ಅಧ್ಯಕ್ಷರ ಚುನಾವಣೆ ನಡೆಸಿರುವುದಿಲ್ಲ. ಆದುದರಿಂದ, ಜಿಲ್ಲಾ ಯೋಜನಾ ಸಮಿತಿಗಳು ಕಾರ್ಯಾರಂಭ ಮಾಡಿರುವುದಿಲ್ಲ.

ಆ) ಹಾಲಿ ಜಾರಿಯಲ್ಲಿರುವ ಅಧಿನಿಯಮದ ಅನುಸಾರ ಜಿಲ್ಲಾ ಯೋಜನಾ ಸಮಿತಿಯ ಅಧ್ಯಕ್ಷರನ್ನು ಸದಸ್ಯರಲ್ಲಿ ಆಯ್ಕೆ ಮಾಡಬೇಕಾಗಿದೆ. ಉಪಾದ್ಯಕ್ಷರು ಇರುವುದಿಲ್ಲ.

ಇ) ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ 1993ಕ್ಕೆ ತಿದ್ದುಪಡಿ ಹೊರಡಿಸಿದ ನಂತರ ಜಿಲ್ಲಾ ಯೋಜನಾ ಸಮಿತಿಗೆ ಅಧ್ಯಕ್ಷ ಆಯ್ಕೆ ಮಾಡಲಾಗುವುದು.

ಡೆಂಟಲ್ ವಿಭಾಗಕ್ಕೆ ಖರೀದಿಸಿದ ಸಲಕರಣೆಗಳು

2872 - ಶ್ರೀ ಎಂ.ಪಿ. ಅಪ್ಪಚ್ಚು ರಂಜನ್ (ಸೋಮವಾರ ಪೇಟೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದ ಡೆಂಟಲ್ ವಿಭಾಗಕ್ಕೆ ಎಷ್ಟು ಲಕ್ಷ ರೂಪಾಯಿಯ ಸಲಕರಣೆಗಳನ್ನು ತೆಗೆದುಕೊಳ್ಳಲಾಗಿದೆ? (ಸಲಕರಣೆವಾರು ವಿವರ ನೀಡುವುದು)?

ಆ) ರಾಜ್ಯದ ಯಾವ ಯಾವ ಜಿಲ್ಲೆಗೆ ಎಷ್ಟೆಷ್ಟು ಸಲಕರಣೆಗಳನ್ನು ಕಳುಹಿಸಿಕೊಡಲಾಗಿದೆ? (ವಿವರ ಕೊಡುವುದು) ಈ ಸಲಕರಣೆಗಳನ್ನು ಯಾವ ಕಂಪನಿಯಿಂದ ಖರೀದಿಸಲಾಗಿದೆ? (ವಿವರ ಕೊಡುವುದು)?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ವಿಶ್ವಬ್ಯಾಂಕ್ ಯೋಜನೆಯಡಿಯಲ್ಲಿ ಈ ಕೆಳಕಂಡ ಉಪಕರಣಗಳನ್ನು ಖರೀದಿಸಲಾಗಿದೆ.